ಆದರೂ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

- ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸ ಲಾಗಿದೆ.

ಭಾರತ ಸಂವಿಧಾನ ಅನುಚ್ಛೇದ 371 ಜೆ ರೀತ್ಯ ಹೈದ್ರಾಬಾದ್ ಕರ್ನಾಟಕ ಪ್ರದೇಶದ ಪ್ರಾದೇಶಿಕ ಮಟ್ಟದ ಸ್ಥಳೀಯ ವೃಮದ ಕುರಿತಂತೆ ಅಧಿಸೂಚನೆ ಹೊರಡಿಸಲಾಗಿದೆ. ಈ ಹುದ್ದೆಗಳಿಗೆ ಸಂಬಂಧ ಪಟ್ಟ ವೈದ್ಯರು ಮತ್ತು ಸಿಬ್ಬಂದಿ ವರ್ಗದವರಿಂದ ಇಚ್ಛೆ ಪತ್ರವನ್ನು ಪಡೆದು, ತದನಂತರ ಖಾಲಿ ಹುದ್ದೆಗಳನ್ನು ಗುರುತಿಸಿ, ಅವುಗಳನ್ನು ಸ್ಥಳೀಯ ವೃಂದ ಮತ್ತು ಮೀಸಲಾತಿ ನಿಯಗಳನ್ವಯ ವರ್ಗೀಕರಿಸಿ, ತದನಂತರ ತಜ್ಞ ವೈದ್ಯರು ಹಾಗೂ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ದಂತ ಆರೋಗ್ಯಾಧಿಕಾರಿ ಮತ್ತು ಇತರೆ ಸಿಬ್ಬಂದಿ ವರ್ಗಗಳ ಹಲವು ವೃಂದಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ಹಾಗೂ ಇತರೆ ಹುದ್ದೆಗಳನ್ನು ಇಲಾಖಾ ನೇರ ನೇಮಕಾತಿ ಸಮಿತಿ ಮುಖಾಂತರ ನೇಮಕಾತಿ ಮಾಡಿಕೊಳ್ಳಲು ಮತ್ತು ಕೆಲವು ಹುದ್ದೆಗಳನ್ನು ಪದೋನ್ನತಿ ಮೂಲಕ ಭರ್ತಿ ಮಾಡಲು ಉದ್ದೇಶಿಲಾಗಿದೆ.

ಆರೋಗ್ಯ ಕೇಂದ್ರವನ್ನು ಮೇಲ್ದರ್ಜೆಗೇರಿಸುವುದು

1664 (2369); ಶ್ರೀ ಭೀಮಾ ನಾಯ್ಕ ಎನ್ (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ತಂಬ್ರ ಹಳ್ಳಿ ಮತ್ತು ಮರಿಯಮ್ಮನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಯಾವಾಗ ಮೇಲ್ದರ್ಜೆಗೇರಿಸಲಾಗುವುದು;

ಇ) ಈ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಪ್ರಸಕ್ತ ಸಾಲಿನ ಲ್ಲಿಯೇ ಅನುದಾನವನ್ನು ಬಿಡುಗಡೆ ಮಾಡಿ ಆಡಳಿತಾತ್ಮಕ ಅನು ಮೋದನೆ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಯು. ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಇಲ್ಲ.

ಆ ಮತ್ತು ಇ) ಉದ್ಭವಿಸುವುದಿಲ್ಲ.

ವಿದ್ಯಾರ್ಥಿ ನಿಲಯಗಳು

1665 (2370); ಶ್ರೀ ಭೀಮಾ ನಾಯ್ಕ್ ಎಸ್. (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಪ್ರಾರಂಭಿಸಲು ಸರ್ಕಾರಕ್ಕೆ ಪ್ರಸ್ತಾವನೆಗಳು ಬಂದಿರುತ್ತವೆ;

ಆ) ಹಾಗಿದ್ದಲ್ಲಿ, ಅತ್ಯಂತ ಹಿಂದುಳಿದ ಹಗರಿಬೊಮ್ಮನಹಳ್ಳಿ ಕ್ಷೇತ್ರದಲ್ಲಿ ಪ್ರೀ ಮೆಟ್ರಿಕ್ ಮತ್ತು ಮೆಟ್ರಿಕ್ ನಂತರದ (ಬಾಲಕರ ಮತ್ತು ಬಾಲಕಿಯರ) ವಿದ್ಯಾರ್ಥಿ ನಿಲಯಗಳು ಹೆಚ್ಚು ಅಗತ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಅಂಕಸಮುದ್ರ ಮತ್ತು ಉಪನಾಯಕನಹಳ್ಳಿ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಪ್ರೀ ಮೆಟಿಕ್ ಮತ್ತು ಬೆಣಕಲ್ಲು ಗ್ರಾಮದಲ್ಲಿ ಪರಿಶಿಷ್ಟ ಪಂಗಡದ ನಿಲಯ ಹಾಗೂ ಅಂಬಳಿ ಗ್ರಾಮದಲ್ಲಿ ಹಿಂದುಳಿದ ವರ್ಗಗಳ ಹಾಗೂ ತಂಬ್ರಳ್ಳಿ ಗ್ರಾಮದಲ್ಲಿ ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ (ಬಾಲಕ ಹಾಗೂ ಬಾಲಕಿ ಯರ) ನಿಲಯಗಳನ್ನು ಯಾವಾಗ ಪ್ರಾರಂಭಿಸಲಾಗುವುದು (ವಿವರಗಳನ್ನು ನೀಡುವುದು)